# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 423 |
| 2 | ಸದಸ್ಯರ ಹೆಸರು | ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ವಿಷಯ | ಸರ್ಕಾರದ ಸವತ್ತುಗಳನ್ನು ಪಡೆಯಲು ಜಾತಿ ಪ್ರಮಾಣ ಪತ್ರಗಳ ಬಗ್ಗೆ. |
| 4 | ಉತ್ತರಿಸುವ ದಿನಾಂಕ | 12.12.2018 |
| 5 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರದ ಸವಲತ್ತುಗಳನ್ನು ಪಡೆಯಲು ಫಲಾನುಭವಿಗಳು ನೀಡುವ ಪ್ರಮಾಣ ಪತ್ರಗಳ ನೈಜತೆಯನ್ನು ಕಡ್ಡಾಯವಾಗಿ ಅಟಲ್ ಜೀ ಜನಸ್ನೇಹಿ ಕೇಂದ್ರದ ಅಂತರ್ಜಾಲದಲ್ಲಿಯೇ ಪರಿಶೀಲಿಸಲು ರಾಜ್ಯ ಸರ್ಕಾರ ಸೂಚನೆ ಹೊರಡಿಸಿದೆಯೇ; ಹೊರಡಿಸಿದಲ್ಲಿ, ಸರ್ಕಾರದ ಸೂಚನೆ/ಸುತ್ತೋಲೆ/ಆದೇಶದ ಪ್ರತಿಗಳೊಂದಿಗೆ ವಿವರ ನೀಡುವುದು; | ಕಂದಾಯ ಇಲಾಖೆಯ ನಾಡಕಛೇರಿ/ಅಟಲ್‌ಜೀ ಜನಸ್ನೇಹಿ ಕೇಂದ್ರಗಳಿಂದ ವಿತರಿಸಲ್ಪಡುವ ಪ್ರಮಾಣ ಪತ್ರಗಳ ನೈಜತೆಯನ್ನು ಅಂತರ್ಜಾಲದಲ್ಲಿ ಪರಿಶೀಲಿಸಿಕೊಳ್ಳುವ ಮಾರ್ಗಸೂಚಿಯ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಂದ ಸಂಖ್ಯೆ:ಕಂಇ/ಎಜೆಎಸ್‌ಕೆ/ಆಡಳಿತ /15/16-17, ದಿನಾಂಕ20-11-2018ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ) |
| (ಆ) | ಹೀಗಿದ್ದರೂ ಸಹ ಅಧಿಕಾರಿಗಳು/ಶಿಕ್ಷಣ ಸಂಸ್ಥೆಯವರು ಹೊಸ ಪ್ರಮಾಣ ಪತ್ರ ಸಲ್ಲಿಸಬೇಕೆಂದು ಫಲಾನುಭವಿಗಳಿಗೆ ಕಿರುಕುಳ/ಒತ್ತಾಯ ಮಾಡಿ, ಅಲೆದಾಡಿ ಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ವಿವರ ನೀಡುವುದು; | ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಇ) | ನಾಡ ಕಛೇರಿಗಳ ಮೂಲಕ ಸಾರ್ವಜನಿಕರಿಗೆ ಜಾತಿ/ಆದಾಯ/ಇತರೆ ಪ್ರಮಾಣ ಪತ್ರಗಳನ್ನು ವಿತರಣೆ ಮಾಡಲಾಗುತ್ತಿದ್ದು, ಸಂಬಂಧಿಸಿದ ಇಲಾಖೆ ಹಾಗೂ ಸಂಸ್ಥೆಯ ಅಧಿಕಾರಿಗಳು ನಾಡಕಛೇರಿ ಅಂತರ್ಜಾಲದಲ್ಲಿ ಪ್ರಮಾಣ ಪತ್ರಗಳ ನೈಜತೆಯನ್ನು ಪರಿಶೀಲಿಸಲು ಅವಕಾಶವಿದ್ದರೂ ಇಂತಹ ಪ್ರಮಾಣ ಪತ್ರಗಳ ಬಗ್ಗೆ ಅನುಮಾನ ವ್ಯಕ್ತಪಡಿಸಿ ಫಲಾನುಭವಿಗಳಿಗೆ ತೊಂದರೆಯಾಗು ವುದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ವಿವಿಧ ಪ್ರಮಾಣ ಪತ್ರಗಳಿಗಾಗಿ ಅರ್ಜಿ ಸಲ್ಲಿಸುವ ಅರ್ಜಿದಾರರಿಗೆ ಎಸ್‌ಎಂಎಸ್ ಮೂಲಕ ನೀಡುವ ಪ್ರಮಾಣ ಪತ್ರದ ಗಣಕೀಕೃತ ಸಂಖ್ಯೆಯನ್ನು ವಿವಿಧ ಇಲಾಖೆಗಳಲ್ಲಿ ಸೌಲಭ್ಯ ಪಡೆಯಲು ಅರ್ಜಿಯಲ್ಲಿ ನಮೂದಿಸಬಹುದಾಗಿರುತ್ತದೆ.<br>ಸದರಿ ಗಣಕೀಕೃತ ಸಂಖ್ಯೆಯನ್ನು ಹೊಂದಿರುವ ಪ್ರಮಾಣ ಪತ್ರದ ನೈಜತೆ ಮತ್ತು ಸಿಂಧುತ್ವವನ್ನು ಪರಿಶೀಲಿಸಲು, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಕರ್ನಾಟಕ ಪ್ರವೇಶ ಪರೀಕ್ಷಾ ಪ್ರಾಧಿಕಾರ, ಆಹಾರ ಇಲಾಖೆ, ರಾಜೀವ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಇಲಾಖೆಗಳಿಗೆ ನಾಡಕಛೇರಿ ವೆಬ್ ಸರ್ವಿಸ್ ಸೇವೆಯನ್ನು ನೀಡಲಾಗಿರುತ್ತದೆ. |

| | | |
|---|---|---|
| (ಈ) | ಹಿಂದುಳಿದ ವರ್ಗಗಳ ಜಾತಿ/ಆದಾಯ ಇತರೆ ಪ್ರಮಾಣ ಪತ್ರಗಳನ್ನು ವಿತರಿಸಿದ ದಿನಾಂಕದಿಂದ ಎಷ್ಟು ವರ್ಷಗಳ ಅವಧಿಯವರೆಗೆ ಚಾಲ್ತಿಯಲ್ಲಿರುತ್ತದೆ; ಈ ಬಗ್ಗೆ ಸರ್ಕಾರದ ಆದೇಶ/ಸುತ್ತೋಲೆ/ ಅಧಿಸೂಚನೆಗಳನ್ನು ಹೊರಡಿಸಿದಲ್ಲಿ ಅದರ ಪ್ರತಿಗಳನ್ನು ನೀಡುವುದು; | ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ ಎಸ್‌ಡಬ್ಲ್ಯೂಡಿ 155 ಬಿಸಿಎ 2012, ದಿನಾಂಕ 22-02-2012ರ ಸುತ್ತೋಲೆಯನ್ವಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1 ಜಾತಿಯವರಿಗೆ ವಿತರಿಸಿದ ಜಾತಿ ಪ್ರಮಾಣ ಪತ್ರಗಳು, ವಿತರಿಸಿದ ದಿನಾಂಕದಿಂದ ಜೀವಿತಾವಧಿಯವರೆಗೆ ಚಾಲ್ತಿಯಲ್ಲಿರುತ್ತದೆ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ ವಿತರಿಸಿದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು, ವಿತರಿಸಿದ ದಿನಾಂಕದಿಂದ 05 ವರ್ಷಗಳವರೆಗೆ ಚಾಲ್ತಿಯಲ್ಲಿರುತ್ತದೆ. (ಸುತ್ತೋಲೆಯ ಪ್ರತಿಯನ್ನು ಲಗತ್ತಿಸಿದೆ). |
| (ಉ) | ಒಂದು ವರ್ಷದೊಳಗೆ ಪಡೆದ ಜಾತಿ/ ಆದಾಯ ಮತ್ತು ಇತರೆ ಪ್ರಮಾಣ ಪತ್ರಗಳನ್ನು ಸಲ್ಲಿಸಿದ್ದರೂ ಸಹ ಕೆಲವು ಇಲಾಖೆ/ಸ್ಥಳೀಯ ಸಂಸ್ಥೆ/ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಮತ್ತೊಮ್ಮೆ ಹೊಸ ಪ್ರಮಾಣ ಪತ್ರಕ್ಕಾಗಿ ಫಲಾನುಭವಿಗಳನ್ನು ಒತ್ತಾಯಿ ಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹವರ ಮೇಲೆ ಸರ್ಕಾರ ಯಾವ ರೀತಿಯ ಕಾನೂನಿನ ಕ್ರಮವನ್ನು ಜರುಗಿಸಿದೆ ಹಾಗೂ ಜರುಗಿಸಲಾಗುವುದು ಎಂಬ ಬಗ್ಗೆ ವಿವರ ನೀಡುವುದು? | ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವ ಹಿನ್ನೆಲೆಯಲ್ಲಿ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಸುತ್ತೋಲೆ ಸಂಖ್ಯೆ ಕಂಇ/ಎಜೆಎಸ್‌ಕೆ/ಆಡಳಿತ/15/16-17, ದಿನಾಂಕ20-11-2018ರಲ್ಲಿ, ಅಟಲ್‌ಜೀ ಜನಸ್ನೇಹಿ ಕೇಂದ್ರದಿಂದ ವಿತರಿಸಲ್ಪಡುವ ಪ್ರಮಾಣ ಪತ್ರಗಳ ನೈಜತೆಯನ್ನು ಪರಿಶೀಲಿಸಿಕೊಳ್ಳಲು ಹಾಗೂ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು ಯಥಾವತ್ತಾಗಿ ಅಳವಡಿಸಿಕೊಳ್ಳಲು ಸಂಬಂಧಿಸಿದ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಸೂಚನೆ ನೀಡಲಾಗಿರುತ್ತದೆ. (ಸುತ್ತೋಲೆಯ ಪ್ರತಿಯನ್ನು ಲಗತ್ತಿಸಿದೆ)<br><br>ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

ಕಂಇ 94 ಎಜೆಎಸ್ 2018

(ಆರ್.ವಿ. ದೇಶಪಾಂಡೆ)
ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು